# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1226

ಸದಸ್ಯರ ಹೆಸರು : ಡಾ:ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 18.03.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಡಿಕೆ ಬೆಳೆಗೆ ಉತ್ತೇಜನ ನೀಡಲು ತೋಟಗಾರಿಕೆ ಇಲಾಖೆಯಿಂದ ಏನಾದರೂ ಕಾರ್ಯಕ್ರಮಗಳಿವೆಯೆ; (ಇದ್ದರೆ, ವಿವರ ನೀಡುವುದು) | ಅಡಿಕೆ ಬೆಳೆಗೆ ಉತ್ತೇಜನ ನೀಡಲು ಇಲಾಖೆಯಿಂದ ಕೈಗೊಂಡ ಕಾರ್ಯಕ್ರಮಗಳು ಈ ಕೆಳಗಿನಂತಿದೆ:-<br><br>1. ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ- ಪ್ರತಿ ಹನಿಗೆ ಅಧಿಕ ಬೆಳೆ ಕಾರ್ಯಕ್ರಮದಡಿಯಲ್ಲಿ (PDMC) ಹನಿ ಹಾಗೂ ತುಂತುರು ನೀರಾವರಿ ಘಟಕ ಅಳವಡಿಸಿಕೊಳ್ಳಲು ಪ್ರಸಕ್ತ ಸಾಲಿನಲ್ಲಿ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಗೆ ಒಳಪಡುವ ತಾಲ್ಲೂಕುಗಳಲ್ಲಿ ಅಡಿಕೆ ಬೆಳೆಗೆ ಗರಿಷ್ಟ 2 ಹೆಕ್ಟೇರ್ ಪ್ರದೇಶದವರೆಗೆ ರೈತರಿಗೆ ಶೇ.90ರಷ್ಟು ಸಹಾಯಧನ ನೀಡಲಾಗುತ್ತಿದೆ. ನಂತರದ 2 ಹೆಕ್ಟೇರ್ ರಿಂದ 5 ಹೆಕ್ಟೇರ್ ಪ್ರದೇಶದವರೆಗೆ ಎಲ್ಲಾ ವರ್ಗದ ರೈತರಿಗೆ ಶೇ. 45 ರಷ್ಟು ಸಹಾಯಧನ ನೀಡಲಾಗುತ್ತಿದೆ.<br><br>2. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಅಡಿಕೆ ಬೆಳೆಯ ಪ್ರದೇಶ ವಿಸ್ತರಣೆ ಕಾರ್ಯಕ್ರಮಕ್ಕೆ ಅಂದಾಜು ಒಟ್ಟು ರೂ.1,80,178 (ಕೂಲಿ ವೆಚ್ಚ ರೂ.1,49,494/-ಗಳು ಹಾಗೂ ಸಾಮಾಗ್ರಿ ವೆಚ್ಚ ರೂ.30,684/-ಗಳು) ಸಹಾಯಧನ ಸೌಲಭ್ಯವನ್ನು ಸಾಂಪ್ರದಾಯಿಕ ಅಡಿಕೆ ಬೆಳೆಯುವ ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ನೀಡಲಾಗುತ್ತಿದೆ.<br><br>3. ಅಡಿಕೆ ಬೆಳೆಗಾರರಿಗೆ ಬೆಳೆಯ ಸಿಂಪರಣೆಗಾಗಿ ದೋಟಿ ಖರೀದಿಸಲು ಸಾಮಾನ್ಯ ವರ್ಗದವರಿಗೆ ಶೇ.40 ರಷ್ಟು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ.50 ರಂತೆ ಸಹಾಯಧನ ನೀಡಲಾಗುತ್ತಿದೆ. |

2023-24ನೇ ಸಾಲಿನಲ್ಲಿ 1,201 ಫಲಾನುಭವಿಗಳಿಗೆ ರೂ.366.68 ಲಕ್ಷಗಳ ಸಹಾಯಧನ ನೀಡಲಾಗಿದೆ.

4. ಪ್ರತಿಕೂಲ ಹವಾಮಾನ ವೈಪರೀತ್ಯಗಳಿಂದ ಬೆಳೆ ನಷ್ಟವಾಗುವ ಸಂಭವನೀಯ ಬೆಳೆಗಳಿಗೆ ರೈತರನ್ನು ಬೆಂಬಲಿಸಲು ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ಯೋಜನೆಯಡಿಯಲ್ಲಿ, ಪ್ರಮುಖ ಅಡಿಕೆ ಬೆಳೆಯುವ ಜಿಲ್ಲೆಗಳಾದ ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ, ಹಾವೇರಿ, ಕೊಡಗು, ಶಿವಮೊಗ್ಗ, ಉತ್ತರ ಕನ್ನಡ, ವಿಜಯನಗರ, ದಾವಣಗೆರೆ, ಉಡುಪಿ, ಹಾಸನ, ಹಾಗೂ ತುಮಕೂರು ಜಿಲ್ಲೆಗಳಲ್ಲಿ ವಿಮಾ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಒಟ್ಟು ವಿಮಾ ಮೊತ್ತ ರೂ.1,28,000 ಗಳಾಗಿದ್ದು, ರೈತರ ವಂತಿಕೆ ಶೇ. 5 ರಂತೆ ರೂ.6,400/-ಗಳನ್ನು ಪ್ರತಿ ಹೆಕ್ಟೇರ್‌ಗೆ ಪಾವತಿಸಬೇಕಾಗಿರುತ್ತದೆ.

5. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಘಟಕ ವೆಚ್ಚದ ರೂ.4,000/- ಗಳಲ್ಲಿ ಶೇ.30 ರಂತೆ, ಪ್ರತಿ ಹೆಕ್ಟೇರ್‌ಗೆ ರೂ.1,200/- ಗಳಂತೆ 4 ಹೆಕ್ಟೇರ್‌ವರೆಗೆ ಗರಿಷ್ಠ ರೂ.4,800/- ಗಳ ಸಹಾಯಧನ ನೀಡಲಾಗುತ್ತಿದೆ.

6. ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ಇತರೆ ತೋಟಗಾರಿಕೆ ಬೆಳೆಗಳಿಗೆ ಘಟಕ ವೆಚ್ಚ ಪ್ರತಿ ಹೆಕ್ಟೇರ್‌ಗೆ ರೂ.10,000/-ಗಳಲ್ಲಿ ಸಾಮಾನ್ಯ ವರ್ಗದವರಿಗೆ ಶೇ.75 ರಂತೆ ರೂ.7,500/-ಗಳು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ.90ರಷ್ಟು ರೂ.9,000/-ಗಳಂತೆ ಸಸ್ಯ ಸಂರಕ್ಷಣೆ ಔಷಧಿಗಳ ಸಹಾಯಧನ ನೀಡಲಾಗುತ್ತಿದೆ.

7. 2022-2023 ಹಾಗೂ 2023-24ನೇ ಸಾಲಿನಲ್ಲಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳು ಮೆಣಸು, ಜಾಯಿಕಾಯಿ, ಬೆಣ್ಣೆ ಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಆಯಾ ಬೆಳೆಗೆ ಅನುಗುಣವಾಗಿ ಶೇ.40 ರಷ್ಟು ಪ್ರತಿ ಹೆಕ್ಟೇರ್‌ಗೆ ರೂ.11,952/-ಗಳಿಂದ ರೂ.1,23,483/-ಗಳವರೆಗೆ ಸಹಾಯಧನವನ್ನು 4

| | | |
|---|---|---|
| | | ಹೆಕ್ಟೇರ್‌ವರೆಗೆ ನೀಡಲಾಗಿದ್ದು, 811.11 ಹೆಕ್ಟೇರ್ ಪ್ರದೇಶದ ನಿರ್ವಹಣೆಗೆ 731 ಫಲಾನುಭವಿಗಳಿಗೆ ರೂ.149.33 ಲಕ್ಷಗಳ ಸಹಾಯಧನ ನೀಡಲಾಗಿರುತ್ತದೆ.<br><br>8. ಇಲಾಖಾ ವತಿಯಿಂದ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ವಿಶ್ವವಿದ್ಯಾಲಯದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.<br><br>9. 2023-24ನೇ ಸಾಲಿನಲ್ಲಿ ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.4,000/- ಗಳಂತೆ 1.5 ಹೆಕ್ಟೇರ್ ವರೆಗೆ ಪ್ರತಿ ಫಲಾನುಭವಿಗೆ ಗರಿಷ್ಠ ರೂ.6,000/-ಗಳ ಮೊತ್ತದ ಸಸ್ಯ ಸಂರಕ್ಷಣಾ ಔಷಧಿಗಳನ್ನು ವಿತರಿಸಲಾಗಿದೆ. 6250 ಹೆಕ್ಟೇರ್ ಪ್ರದೇಶದಲ್ಲಿ ಒಟ್ಟು ರೂ.250.00ಲಕ್ಷಗಳ ಅನುದಾನವನ್ನು ವಿನಿಯೋಗಿಸಿ 12300 ಅಡಿಕೆ ಬೆಳೆಗಾರರಿಗೆ ಸಹಾಯಧನವನ್ನು ನೀಡಲಾಗಿರುತ್ತದೆ.<br><br>10. ಅಡಿಕೆ ಎಲೆ ಚುಕ್ಕೆ ರೋಗ ಹಾಗೂ ಹಳದಿ ಎಲೆ ರೋಗಗಳ ನಿಯಂತ್ರಣಕ್ಕಾಗಿ ಕೇಂದ್ರ ಸರ್ಕಾರ ನೇಮಿಸಿರುವ ವೈಜ್ಞಾನಿಕ ತಂಡದ ಸಮಿತಿಯು ಫೈಟೋಸ್ಯಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಪೋಷಕಾಂಶಗಳ ನಿರ್ವಹಣೆ, ಸಸ್ಯ ಸಂರಕ್ಷಣೆ ಕ್ರಮಗಳ ಅಳವಡಿಕೆ ಹಾಗೂ ತಾಂತ್ರಿಕ ಮಾಹಿತಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಶಿಫಾರಸ್ಸು ಮಾಡಿದೆ. ಇದರನ್ವಯ ಎಲೆ ಚುಕ್ಕೆ ರೋಗದಿಂದ ಹಾನಿಯಾಗಿರುವ ಸುಮಾರು 53977 ಹೆಕ್ಟೇರ್ ಪ್ರದೇಶಕ್ಕೆ ರೂ.225.73 ಕೋಟಿಗಳ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅನುದಾನ 60:40 ರ ಅನುಪಾತದಲ್ಲಿದೆ ಹಾಗೂ ಈ ಕಾರ್ಯಕ್ರಮವು 2 ವರ್ಷಗಳ ಅವಧಿಯದ್ದಾಗಿರುತ್ತದೆ. ಇದರಲ್ಲಿ ಕೇಂದ್ರ ಸರ್ಕಾರವು ತನ್ನ ಪಾಲಿನ ಅನುದಾನ ರೂ.37 ಕೋಟಿಗಳನ್ನು (60%) ಬಿಡುಗಡೆ ಮಾಡಿ ರಾಷ್ಟ್ರೀಯ ತೋಟಗಾರಿಕೆ |

| | | |
|---|---|---|
| | | ಮಿಷನ್ ಯೋಜನೆಯಡಿ ಮಾರ್ಗಸೂಚಿ ಅನುಸಾರ ಅನುಷ್ಠಾನಗೊಳಿಸಲು ಸೂಚಿಸಿದೆ. ರಾಜ್ಯ ಸರ್ಕಾರದ ಪಾಲಿನ ಅನುದಾನ ರೂ.26.44 ಕೋಟಿಗಳನ್ನು (40%) ಬಿಡುಗಡೆಗೊಳಿಸಲು ಕ್ರಮಕೈಗೊಳ್ಳಲಾಗಿದೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅಡಿಕೆ ಸೇರಿದಂತೆ ಎಲ್ಲಾ ತೋಟಗಾರಿಕೆ ಬೆಳಗಳಲ್ಲಿ ಸಸ್ಯ ಸಂರಕ್ಷಣೆ ಕೈಗೊಳ್ಳಲು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವಲ್ಲಿ ಪ್ರತಿ ಹೆಕ್ಟೇರ್‌ಗೆ ರೂ.1,200/-ಗಳಂತೆ ಗರಿಷ್ಟ 4 ಹೆಕ್ಟೇರ್ ವರೆಗೆ ರೂ.4,800/-ಗಳ ಸಹಾಯಧನ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ ವೈಜ್ಞಾನಿಕ ತಂಡದ ಶಿಫಾರಸ್ಸಿನಂತೆ ಸಸ್ಯ ಸಂರಕ್ಷಣಾ ಔಷಧಿಗಳ ಹಾಗೂ ಸಿಂಪಡಣೆಗೆ ಸಹಾಯಧನ, ಫೈಟೋಸ್ಯಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು) ಪೋಷಕಾಂಶಗಳ ನಿರ್ವಹಣೆ ಮತ್ತು ತಾಂತ್ರಿಕ ಮಾಹಿತಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳ ಒಟ್ಟಾರೆ ಅನುಷ್ಠಾನಕ್ಕಾಗಿ ಪ್ರತಿ ಹೆಕ್ಟೇರ್‌ಗೆ ರೂ.41,820/-ಗಳ ಅಗತ್ಯವಿರುತ್ತದೆ. ಆದುದರಿಂದ ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣಕ್ಕೆ ಕೇಂದ್ರ ಸರ್ಕಾರದ ಸೂಚನೆಯನ್ನು ಮರುಪರಿಶೀಲಿಸಿ ಅನುಮತಿಸುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿರುತ್ತದೆ.<br><br>11. ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ, ರವರಿಗೆ 2023-24 ನೇ ಸಾಲಿನಲ್ಲಿ ರೂ.43.61 ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಅಡಿಕೆ ಎಲೆ ಚುಕ್ಕೆ ರೋಗಕ್ಕೆ ಕಾರಣವಾದ ರೋಗಾಣುವಿನ ಗುರುತಿಸುವಿಕೆ ಇತರೆ ತೋಟಗಾರಿಕೆ ಬೆಳೆಗಳಿಂದ ಎಲೆ ಚುಕ್ಕೆ ರೋಗಕ್ಕೆ ಕಾರಣವಾಗುವ ರೋಗಾಣುವಿನ ಗುರುತಿಸುವಿಕೆ ಸಸ್ಯ ಸಂರಕ್ಷಣೆ ಔಷಧಿಗಳು, ಜೈವಿಕ ನಿರೋದಕಗಳ ವಿವಿಧ ಪ್ರಮಾಣ (dosage) ಗಳಿಂದ ರೋಗವನ್ನು ನಿಯಂತ್ರಿಸುವುದು ಹಾಗೂ ರೋಗದ ಬದುಕುಳಿಯುವಿಕೆಯ (Survaival) ಕುರಿತು ಸಂಶೋಧನೆ ಕೈಗೊಳ್ಳಲಾಗುತ್ತಿದ್ದು, ಪ್ರಗತಿಯಲ್ಲಿರುತ್ತದೆ.<br><br>12. ಹಳದಿ ಎಲೆ ರೋಗದ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ |

| | | |
|---|---|---|
| | | ಅನುದಾನವನ್ನು ಪ್ರಯೋಗಾಲಯದ ಉನ್ನತೀಕರಣಕ್ಕಾಗಿ ಒದಗಿಸಲಾಗಿದೆ. ಇದರಿಂದ ರೋಗವನ್ನು ತುರ್ತಾಗಿ ಕಂಡುಹಿಡಿಯಲು ಸಹಕಾರಿಯಾಗುತ್ತಿದೆ.<br><br>13. ರೋಗ ರಹಿತ ಅಡಿಕೆ ಸಸಿಗಳನ್ನು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಂದ ಉತ್ಪಾದಿಸಲಾಗುತ್ತಿದೆ.<br><br>14. ಅಡಿಕೆ ಕೊಳೆ ರೋಗ ಬಾಧಿತ ರೈತರಿಗೆ ಪರಿಹಾರ ಒದಗಿಸಲು NDRF/SDRF ಮಾರ್ಗಸೂಚಿಯನ್ವಯ ಬೆಳೆ ಹಾನಿಯಾಗಿರುವ ಅಂದಾಜು 79,123.67 ಹೆಕ್ಟೇರ್ ಪ್ರದೇಶಕ್ಕೆ ಪ್ರತಿ ಹೆಕ್ಟೇರ್‌ಗೆ ರೂ.22,500/-ಗಳಂತೆ ಕೇಂದ್ರ ಸರ್ಕಾರಕ್ಕೆ ರೂ.178.03 ಕೋಟಿಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ.<br><br>15. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ "INNOVATIVE RESEARCH COMPONENT" ಅಡಿಯಲ್ಲಿ ರೂ.689/-ಲಕ್ಷಗಳ ವೆಚ್ಚದಲ್ಲಿ ಸಂಶೋಧನೆ ಕೈಗೊಳ್ಳಲು ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ. |
| ಆ) | ಅಡಿಕೆ ಬೆಳೆಗೆ ಉತ್ತೇಜನ ನೀಡಲು ಮತ್ತು ಅದಕ್ಕೆ ಮಾರುಕಟ್ಟೆ ಒದಗಿಸಲು ಅಡಿಕೆ ಅಭಿವೃದ್ಧಿ ನಿಗಮ ರಚನೆ ಮಾಡುವ ಆಲೋಚನೆ ಇದೆಯೇ; ಇದ್ದರೆ ಯಾವಾಗ ಮಾಡಲಾಗುವುದು; | ಪ್ರಸ್ತುತ ಅಡಿಕೆ ಅಭಿವೃದ್ಧಿ ನಿಗಮ ರಚನೆ ಮಾಡುವ ಆಲೋಚನೆ ಇರುವುದಿಲ್ಲ. |
| ಇ) | ಅಡಿಕೆಯಿಂದ ಸಾಕಷ್ಟು ಉಪಯೋಗಗಳಿದ್ದರೂ ಅಡಿಕೆ ಸೇವನೆಯಿಂದ ಕ್ಯಾನ್ಸರ್ ಬರಬಹುದೆಂದು ವಿಶ್ವ ಆರೋಗ್ಯ ಸಂಸ್ಥೆ ಹೇಳಿರುವುದಾಗಿ ವರದಿಯಾಗಿದ್ದು, ಈ ಬಗ್ಗೆ ಸಂಶೋಧನೆ ನಡೆದಿದೆಯೇ; ಸಂಶೋಧನೆ ಮಾಡಿ ವರದಿ ತರಿಸುವ ಆಲೋಚನೆ ಇದೆಯೇ? | **ಹೌದು.**<br><br>**ಅಡಿಕೆ ಕ್ಯಾನ್ಸರ್ ಕಾರಕ ಎಂಬ ಅಪವಾದ ತೊಡೆದುಹಾಕಲು ಪ್ರತಿಷ್ಠಿತ ಸಂಸ್ಥೆಗಳಿಂದ ಸಂಶೋಧನೆ ನಡೆಸಲು ಕೈಗೊಂಡ ಕ್ರಮಗಳು ಕೆಳಗಿನಂತಿವೆ:-**<br>1. ರಾಜ್ಯ ಸರ್ಕಾರದ ವತಿಯಿಂದ ಅಡಿಕೆ ಔಷಧೀಯ ಗುಣಗಳ ಬಗ್ಗೆ ದಾಖಲೆ ಆಧಾರದಲ್ಲಿ ತಿಳಿಸಲು ತೋಟಗಾರಿಕೆ ಇಲಾಖೆ ವತಿಯಿಂದ ಎಂ.ಎಸ್. ರಾಮಯ್ಯ ಬೆಂಗಳೂರು ಸಂಸ್ಥೆಯಲ್ಲಿ ಸಂಶೋಧನೆಯನ್ನು ಕೈಗೊಳ್ಳಲಾಗಿದೆ. ಎಂ.ಎಸ್.ರಾಮಯ್ಯ ವಿಶ್ವ ವಿದ್ಯಾನಿಲಯರವರು ನೀಡಿರುವ ವರದಿಯಲ್ಲಿ ಅಡಿಕೆಯು ಕ್ಯಾನ್ಸರ್ ಕಾರಕವಲ್ಲ ಎಂಬ ವಿಷಯದ ಬಗ್ಗೆ ಮತ್ತು |

| | | |
|---|---|---|
| | | ಅಡಿಕೆಯನ್ನು ತಂಬಾಕು ಅಥವಾ ಪಾನ ಮಸಾಲಗಳೊಂದಿಗೆ ಬಳಸದೆ ಇದ್ದಲ್ಲಿ ಹಾಗೂ ಮಿತ ಹಿತ ಪ್ರಮಾಣದಲ್ಲಿ ಸೇವನೆ ಮಾಡಿದಲ್ಲಿ ಅಪಾಯಕಾರಿಯಲ್ಲವೆಂಬುದು ವರದಿಯಾಗಿದೆ.<br><br>2. ಕೇಂದ್ರ ಸರ್ಕಾರದ ವತಿಯಿಂದ ಅಡಿಕೆ ಮತ್ತು ಮಾನವ ಆರೋಗ್ಯ ಕುರಿತು ಸಾಕ್ಷ್ಯಾಧಾರ ಸಹಿತವಾದ ಸಂಶೋಧನೆ ಕೈಗೊಳ್ಳಲು Kasturba Medical College, Manipal, Council of Scientific and Industrial Research-National Botanical Research Institute, Lucknow, Council of Scientific and Industrial Research -Central Food Technological Research Institute, Mysuru, Indian Council of Agricultural Research -Central Plantation Crops Research Institute, kasragodu, NITTE University, Mangaluru, Council of Scientific and Industrial Research-Centre for Cellular & Molecular Biology, Hyderabad, National Institute of Mental Health and Neuro Sciences, Bengaluru, All India Institute of Medical Sciences, New Delhi, Shri Dharmasthala Manjunatheshwara University, Dharwad ಗಳಿಗೆ ರೂ.3.64 ಕೋಟಿಗಳನ್ನು ಒದಗಿಸಲು ಅನುಮೋದನೆ ನೀಡಲಾಗಿದೆ. ಸದರಿ ಕಾರ್ಯಕ್ರಮದ ಅನುಷ್ಠಾನ ಕುರಿತಂತೆ ಮಾರ್ಗದರ್ಶನ ಮಾಡಲು ಹಾಗೂ ಮೇಲ್ವಿಚಾರಣೆ ಮಾಡಲು ತೋಟಗಾರಿಕೆ ಆಯುಕ್ತರು ರೈತರ ಕಲ್ಯಾಣ ಇಲಾಖೆ, ಭಾರತ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. |

**ಸಂಖ್ಯೆ: HORTI 123 HGM 2025**

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**